ಎಲ್.ಕೆ. ಅತೀಕ್, ಭಾ.ಆ.ಸೇ.,
ಸರ್ಕಾರದ ಪ್ರಧಾನ ಕಾರ್ಯದರ್ಶಿ
**L.K. Atheeq, I.A.S.,**
**Principal Secretary to Government**

ಕರ್ನಾಟಕ ಸರ್ಕಾರ ಸಚಿವಾಲಯ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
Karnataka Government Secretariat
Rural Development & Panchayat Raj Department

ಸಂಖ್ಯೆ:ಗ್ರಾಅಪ/46/ಇ-ಆಡಳಿತ/2020 ದಿನಾಂಕ:02.12.2020

ಇವರಿಗೆ,

ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ನ
ಮುಖ್ಯ ಕಾರ್ಯನಿರ್ವಹಕ ಅಧಿಕಾರಿಗಳು,

ವಿಷಯ: ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಸಕಾಲ ಸಪ್ತಾಹ ಆಚರಿಸುವ ಬಗ್ಗೆ.

ಉಲ್ಲೇಖ:
1. ಅ.ಸ.ಪತ್ರ ಸಂಖ್ಯೆ:ಸಿಆಸುಇ 97 ಎಸ್.ಎ.ಎಂ.ಎಸ್ 2020 ದಿನಾಂಕ: 21.11.2020
2. ಅ.ಸ.ಪತ್ರ ಸಂಖ್ಯೆ:ಗ್ರಾಅಪ/46/ಇ-ಆಡಳಿತ 2020 ದಿನಾಂಕ: 27.11.2020

*****

ರಾಜ್ಯದ ನಾಗರೀಕರಿಗೆ ನಿಗದಿತ ಕಾಲಮಿತಿಯಲ್ಲಿ ಸೇವೆಗಳನ್ನು ಒದಗಿಸುವ ಉದ್ದೇಶದಿಂದ ಸಕಾಲ ಯೋಜನೆಯನ್ನು ಜಾರಿಗೆ ತರಲಾಗಿದ್ದು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಒಟ್ಟು17 ಸೇವೆಗಳನ್ನು ಸಕಾಲ ವ್ಯಾಪ್ತಿಯಡಿ ತರಲಾಗಿದೆ. ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ಸಲುವಾಗಿ ಸಕಾಲ ಸಪ್ತಾಹವನ್ನು ಆಚರಿಸಲು ಸರ್ಕಾರವು ಉದ್ದೇಶಿಸಿದೆ. ಆದ್ದರಿಂದ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಅಧೀನ ಇಲಾಖೆಗಳ ಕಚೇರಿಗಳಲ್ಲಿ ದಿನಾಂಕ: 07.12.2020 ರಿಂದ ದಿನಾಂಕ:11.12.2020 ರವರೆಗೆ ಸಕಾಲ ಸಪ್ತಾಹವನ್ನು ಆಚರಿಸುವಂತೆ ಉಲ್ಲೇಖ ಪತ್ರ (1)ರಲ್ಲಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ(ಇ-ಆಡಳಿತ) ಇವರು ಅಗತ್ಯ ಕ್ರಮ ಕೈಗೊಳ್ಳಲು ಕೋರಿರುತ್ತಾರೆ.

ಅದರಂತೆ ದಿನಾಂಕ:07.12.2020 ರಿಂದ ದಿನಾಂಕ: 11.12.2020 ರವರೆಗೆ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ಕಡ್ಡಾಯವಾಗಿ ಸಕಾಲ ಸಪ್ತಾಹವನ್ನು ಆಚರಿಸಲು ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ ನಿರ್ದೇಶಿಸಲು ಈ ಮೂಲಕ ಸೂಚಿಸಿದೆ.

ಇತ್ತೀಚಿಗೆ ಗ್ರಾಅಪ ಇಲಾಖೆಯು 12 ಸಕಾಲ ಸೇವೆಗಳ ಅರ್ಜಿಗಳನ್ನು ಆನ್ ಲೈನ್ ಮೂಲಕ ಸ್ವೀಕರಿಸಿ, ಸಂಸ್ಕರಿಸಿ ಮತ್ತು ವಿತರಿಸುವಂತೆ ಹಾಗೂ ಪ್ರಮಾಣ ಪತ್ರ ವಿತರಣೆಗಾಗಿ ಮತ್ತು ಆನ್ ಲೈನ್ ಮೂಲಕ ತೆರಿಗೆ ಪಾವತಿಗಾಗಿ ಬಾಪೂಜಿ ಸೇವಾ ಕೇಂದ್ರವನ್ನು ಅನುಷ್ಠಾನಗೊಳಿಸಲಾಗಿದೆ.

ಬಹುಮಹಡಿ ಕಟ್ಟಡ, 3ನೇ ಮಹಡಿ, 3ನೇ ಗೇಟ್, ಬೆಂಗಳೂರು – 560001. M.S. Building, 3rd Floor, Gate No. 3, Bengaluru - 560 001
Tel.: 080-2235 3929 / 2203 2446 Fax : 080-2235 3927 e-mail : prsrdpr@karnataka.gov.in / principalsecretaryrdpr@gmail.com

ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ದಿನಾಂಕ: 07.12.2020 ರಿಂದ ದಿನಾಂಕ: 11.12.2020 ರವರೆಗೆ ಸಕಾಲ ಸಪ್ತಾಹವನ್ನು ಆಚರಿಸುವ ವೇಳೆಯಲ್ಲಿ ಬಾಪೂಜಿ ಸೇವಾ ಕೇಂದ್ರ ಮೂಲಕ ಸೇವೆಗಳನ್ನು ಆನ್ ಲೈನ್ ಮೂಲಕ ವಿತರಿಸುವ ಮತ್ತು ತೆರಿಗೆಯನ್ನು ಆನ್ ಲೈನ್ ಮೂಲಕ ಪಾವತಿಸುವ ಬಗ್ಗೆ ಮಾಹಿತಿಯನ್ನು ಸಾರ್ವಜನಿಕರಿಗೆ ಒದಗಿಸುವಂತೆ ಈ ಮೂಲಕ ಸೂಚಿಸಿದೆ.

**ಸಕಾಲ ಸಪ್ತಾಹದ ಅವಧಿಯಲ್ಲಿ ಪಾಲಿಸಬೇಕಾದ ಅಂಶಗಳು ಈ ಕೆಳಗಿನಂತಿವೆ:**

1. ಹೊಸದಾಗಿ ಸ್ವೀಕರಿಸುವ ಅರ್ಜಿಗಳನ್ನು ಸಕಾಲದಡಿ ಸ್ವೀಕರಿಸಿ ನಿಗದಿತ ಕಾಲಮಿತಿಯಲ್ಲಿ ವಿಲೇವಾರಿ ಮಾಡುವುದು.
2. ಸಕಾಲದಡಿ ಸ್ವೀಕರಿಸಿ ಬಾಕಿ ಉಳಿದ ಅರ್ಜಿಗಳನ್ನು ವಿಲೇ ಮಾಡುವುದು.
3. ಸಾರ್ವಜನಿಕರಲ್ಲಿ ಸಕಾಲ ಕುರಿತು ಅರಿವು ಮೂಡಿಸುವುದು.
4. ಸಕಾಲದ ಕುರಿತು ಇತರೆ ಯಾವುದೇ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದಲ್ಲಿ ಸಕಾಲ ಮಿಷನ್ ಗೆ ಮಾಹಿತಿ ಒದಗಿಸುವುದು.
5. ಗ್ರಾಮ ಪಂಚಾಯತಿ ಕಚೇರಿಗಳಲ್ಲಿ ಸಕಾಲ ಸೇವೆಗಳ ವಿವರಗಳನ್ನೊಳಗೊಂಡ ಹಾಗೂ ಬಾಪೂಜಿ ಸೇವಾ ಕೇಂದ್ರ ಬ್ಯಾನರ್ ಗಳನ್ನು ಪ್ರದರ್ಶಿಸುವುದು. (ಬ್ಯಾನರ್ ಗಳ ಮಾದರಿಗಳನ್ನು ದಿನಾಂಕ: 04.12.2020 ರಂದು ಇಮೇಲ್ ಮೂಲಕ ಕಳುಹಿಸಲಾಗುವುದು)
6. ಸಕಾಲ ಸಪ್ತಾಹದ ಬಗ್ಗೆ ಹಾಗೂ ಬಾಪೂಜಿ ಸೇವಾ ಕೇಂದ್ರ ಮೂಲಕ ಸೇವೆಗಳನ್ನು ಆನ್ ಲೈನ್ ಮೂಲಕ ವಿತರಿಸುವ ಮತ್ತು ತೆರಿಗೆಯನ್ನು ಆನ್ ಲೈನ್ ಮೂಲಕ ಪಾವತಿಸುವ ಬಗ್ಗೆ ಪತ್ರಿಕಾ ಪ್ರಕಟಣೆ ಹೊರಡಿಸುವುದು.
7. ಸಕಾಲ ಸಪ್ತಾಹದ ಬಗ್ಗೆ ಹಾಗೂ ಬಾಪೂಜಿ ಸೇವಾ ಕೇಂದ್ರ ಮೂಲಕ ಸೇವೆಗಳನ್ನು ಆನ್ ಲೈನ್ ಮೂಲಕ ವಿತರಿಸುವ ಮತ್ತು ತೆರಿಗೆಯನ್ನು ಆನ್ ಲೈನ್ ಮೂಲಕ ಪಾವತಿಸುವ ಬಗ್ಗೆ ಧ್ವನಿ ವರ್ಧಕದ ಮೂಲಕ ಅಥವಾ ಆಟೋದ ಮೂಲಕ ಪ್ರಚಾರವನ್ನು ಕೈಗೊಳ್ಳುವುದು.
8. ಸಪ್ತಾಹದ ಅಂತ್ಯದಲ್ಲಿ ವಿಲೇವಾರಿಯಾದ ಅರ್ಜಿಗಳ ಕುರಿತು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಇ-ಆಡಳಿತ ಶಾಖೆಗೆ ಮತ್ತು ಸಕಾಲ ಮಿಷನ್ ಗೆ ವರದಿ ನೀಡುವುದು. (ನಮೂನೆ ಲಗತ್ತಿಸಿದೆ) ಸಕಾಲ ಸಪ್ತಾಹ ಆಚರಣೆ ಬಗ್ಗೆ ಸಕಾಲ ಮಿಷನ್ ತಂಡವು ಕಚೇರಿಗಳಿಗೆ ಭೇಟಿ ನೀಡಿ ತಪಾಸಣೆ ನಡೆಸಲಿದೆ.
9. ಸಕಾಲ ಸಪ್ತಾಹವನ್ನು ಆಚರಿಸಲು ತಗಲುವ ವೆಚ್ಚವನ್ನು ಗ್ರಾಮ ಪಂಚಾಯತಿಯ ಸ್ವಂತ ನಿಧಿಯಿಂದ ಭರಿಸುವುದು.

ಸದರಿ ಸಪ್ತಾಹವನ್ನು ಯಶಸ್ವಿಯಾಗಿ ಆಚರಿಸಬೇಕಾಗಿ ಕೋರಿದೆ.

ಶುಭಾಶಯಗಳೊಂದಿಗೆ,

ತಮ್ಮ ವಿಶ್ವಾಸಿ

2/12/2020

ಪ್ರತಿ:

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ(ಇ-ಆಡಳಿತ).
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,(ಪಂಚಾಯತ್ ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
3. ಆಯುಕ್ತರು, ಪಂಚಾಯತ್ ರಾಜ್ ಆಯುಕ್ತಾಲಯ.
4. ಅಪರ ಮಿಷನ್ ನಿರ್ದೇಶಕರು-1, ಸಕಾಲ ಮಿಷನ್.
5. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಉಪಕಾರ್ಯದರ್ಶಿಗಳು.
6. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತ್‌ಗಳ ಕಾರ್ಯನಿರ್ವಹಣಾಧಿಕಾರಿಗಳು.
7. ರಾಜ್ಯದ ಎಲ್ಲಾ ಗ್ರಾಮ ಪಂಚಾಯತ್‌ಗಳ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು.

# SAKALA SAPTHAHA

## (RepoRt Format)

### (07-December-2020 to 11-December-2020)

**Department Name:**

**Office Name& Address:**

| Total Sakala Services Offered in the Office | Citizen Service Count | Personnel Service Count (If applicable) | No. of Sakala applications received during the Sapthaha | No.ofSakalaapplications disposed during Sapthaha | Total Applications disposed In-time during Sapthaha | In-time Disposal percentage during Sapthaha | Total applications Rejected during Sapthaha | Rejection Percentage during Sapthaha | Total Applications Pending for disposal on 07 Dec-2020 (Morning) | Total Applications Pending for disposal on the eve of 11-Dec-2020 | Appeals Pending for Disposal before Sapthaha | Appeals Pending for Disposal Post-Sapthaha |
|---|---|---|---|---|---|---|---|---|---|---|---|---|
| | | | | | | | | | | | | |

List of GSC Numbers Received during Sapthaha:

List of GSC Numbers Disposed during Sapthaha:

## Details About Applications Rejected during Sapthaha

| GSC Numbers | Service Names | Reason for Rejection |
|---|---|---|
| | | |

## Details About Applications Pending for Disposal post due dateas on the eve of 11-12-2020

| GSC Numbers | Service Names | Reason for not disposing the applications within stipulated time |
|---|---|---|
| | | |

Sakalaawareness, measures/activities conducted by the designated office during the Sapthaha: